ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ/ವಾರ್ಡ್ ಸಮಿತಿ ಸಹಾಯಕಅಭಿಯಂತರರಕಛೇರಿ ವಾರ್ಡ್ ಸಂಖ್ಯೆ: 138 ಜೆ.ಜೆ.ಆರ್ ನಗರ ಬೆಂಗಳೂರು

ಸಂಖ್ಯೆ: W-137/Committee/Proceding -21/2021-22 dt0 6-09-2021

# ವಾರ್ಡ್ ಹಂತದ ಸಮಿತಿ ಸಭೆ

## ವಾರ್ಡ್ ಸಂಖ್ಯೆ: 137

**09-08-2021** ರಂದು ಬೆಳಿಗ್ಗೆ **11.30** ಘಂಟೆಗೆ ವಾರ್ಡ್ ಸಂಖ್ಯೆ: **137** ರಾಯಪುರಂ ವಾರ್ಡ್ ಹಂತದ ಸಮಿತಿ ಸಭೆಯನ್ನು ಶ್ರೀ. ಮೊಹಮದ್ ಜಾವೀದ್. ಸಹಾಯಕ ಕಾರ್ಯಪಾಲಕ ಅಭಿಯಂತರರು(ಕಾಮಗಾರಿ) ವಸಂತನಗರ ಉಪ ವಿಭಾಗ ಬಿ.ಬಿ.ಎಂ.ಪಿ ಹಾಗೂ ಅಧ್ಯಕ್ಷರು ಮತ್ತು ವಾರ್ಡ್‌ನ ನೋಡೆಲ್ ಅಧಿಕಾರಿ ವಾರ್ಡ್ ಸಂಖ್ಯೆ 137 ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡೆಸಲಾಯಿತು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಚುನಾಯಿತ ಪ್ರತಿನಿಧಿ ಅಧಿಕಾರ ಅವಧಿಯು ದಿನಾಂಕ: **10-09-2020**ಕ್ಕೆ ಮುಕ್ತಾಯವಾಗಿದ್ದು, ಬಿ.ಬಿ.ಎಂ.ಪಿಯ ಪ್ರತಿ ವಾರ್ಡ್‌ಗೆ ನೋಡೆಲ್ ಅಧಿಕಾರಿ ನೇಮಕಾತಿ ಮತ್ತು ವಾರ್ಡ್ ಹಂತದ ಸಮಿತಿ ರಚಿಸಿದ್ದು, ವಾರ್ಡ್‌ಗೆ ಸಂಬಂಧಿಸಿದಂತೆ ಸಾರ್ವಜನಿಕರ ಹಿತರಕ್ಷಣೆ ಗಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಗೆ ಅಹ್ವಾನಿಸಿದ ಮಾನ್ಯ ಅಧ್ಯಕ್ಷರಿಗೆ ಮತ್ತು ಸಮಿತಿಯ ಸದಸ್ಯರುಗಳಿಗೆ ಸಮಿತಿಯ ಕಾರ್ಯದರ್ಶಿ ಸಭೆಗೆ ಸ್ವಾಗತ ಕೋರುತ್ತಾ ಸಮಿತಿಯ ಅಧ್ಯಕ್ಷರಾದ ಶ್ರೀ.ಮೊಹಮದ್ ಜಾವೀದ್ ರವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು ಹಾಗೂ ಈ ಹಿಂದಿನ ಸಭೆಯ ನಡಾವಳಿಯ ನಿರ್ಣಯಗಳ ಬಗ್ಗೆ ಕೈಗೊಂಡ ಕಾರ್ಯವನ್ನು ಪರಿಶೀಲಿಸಲಾಯಿತು.

### ಸಭೆಯಲ್ಲಿಚರ್ಚಿಸಲಾದ ವಿಷಯಗಳು

ಮೊದಲಿಗೆ ಈ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳ ಬಗ್ಗೆ ಗಮನಹರಿಸುತ್ತಾ ಹಾಗೂ ಸಾರ್ವಜನಿಕರಿಂದ ಬಂದ ದೂರುಗಳನ್ನು ಪರಿಹರಿಸಿದ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು.

ಸಹಾಯಕ ಕಾರ್ಯನಿರ್ವಹಕ ಅಧಿಕಾರಿಗಳ ಪ್ರತಿನಿಧಿ ಹಾಗೂ ಕೆಲಸ ಪರಿವೀಕ್ಷಕರು ದೂರು ಪುಸ್ತಕವನ್ನು ಸಭೆಯಲ್ಲಿ ನೀಡಿ ಸಾರ್ವಜನಿಕರಿಂದ ಬಂದ ದೂರುಗಳ ಪಟ್ಟಿ ಮತ್ತು ದೂರುಗಳನ್ನು ಪರಿಹರಿಸಿದ ದಿನಾಂಕ ಮತ್ತು ವಿವರಗಳನ್ನು ಸಭೆಯಲ್ಲಿ ಮಂಡಿಸಿದರು.

ಕಳೆದ ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚುವಂತೆ ಸಭಾಧ್ಯಕ್ಷರು ಸೂಚಿಸಿರುವಂತೆ ಹಾಗೂ ಮಾನ್ಯ ಆಯುಕ್ತರ ಆದೇಶದಂತೆ ವಾರ್ಡ್ ವ್ಯಾಪ್ತಿಯ ಟಿ.ಟಿ.ಆರ್ ನಗರ ಮುಖ್ಯ ರಸ್ತೆಗಳಲ್ಲಿ ರಸ್ತೆ ಗುಂಡಿಯನ್ನು ಮುಚ್ಚಿದ್ದು ಮುಂದಿನ ದಿನಗಳಲ್ಲಿ ಇತರೆ ಪ್ರದೇಶಗಳಲ್ಲಿ ಗುಂಡಿ ಮುಚ್ಚುವುದಾಗಿ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಯ ಕಾರ್ಯಗಳ ಬಗ್ಗೆ ಸಭೆಯಲ್ಲಿ ವಿವರಣೆ ನೀಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ -137ರ ವ್ಯಾಪ್ತಿಯಲ್ಲಿ ಬರುವ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿ ಪುಸ್ತಕವನ್ನು ಸಭೆಯಲ್ಲಿ ನೀಡಿದರು ಹಾಗೂ ಇತ್ತೀಚಿಗೆ ಬಂದ ದೂರುಗಳ ವಿವರ ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ಸಭೆಯಲ್ಲಿ ವಿವರಣೆ ನೀಡಿದರು.

ಅಧ್ಯಕ್ಷರು ಪ್ರತಿ ನಿತ್ಯ ಬಿ.ಬಿ.ಎಂ.ಪಿ ಪೌರ ಕಾರ್ಮಿಕರು ಮತ್ತು ಗುತ್ತಿಗೆ ಪೌರ ಕಾರ್ಮಿಕರ ಹಾಜರಾತಿ ಪುಸ್ತಕ ಮತ್ತು ವಾಹನಗಳ ಹಾಜರಾತಿಯ ವಿವರವನ್ನು ನೀಡುವಂತೆ ಸಭೆಯಲ್ಲಿ ತಿಳಿಸಿದರು.

ಅಧ್ಯಕ್ಷರು ಡಬ್ಲ್ಯೂಎಸ್ಎಸ್‌ಬಿ ಕಛೇರಿಗೆ ವಾರ್ಡ್ 137 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ತಿಳಿಸುವಂತೆ ಸಭೆಯಲ್ಲಿ ತಿಳಿಸಿದರು

ಬಿಡಬ್ಲ್ಯೂಎಸ್ಎಸ್‌ಬಿ ಅಧಿಕಾರಿಗಳು ವಾರ್ಡ್ 137 ವ್ಯಾಪ್ತಿಗೆ ಸಂಬಂಧಿಸಿ ಬಂದಂತಹ ದೂರು ಮತ್ತು ತಕ್ಷಣ ಸ್ಥಳಕ್ಕೆ ಬೇಟಿ ನೀಡಿ ಕ್ರಮ ಕೈಗೊಂಡಿರುವ ಬಗ್ಗೆ ಸಭೆಯಲ್ಲಿ ವಿವರಿಸಿದರು ಮತ್ತು ಸಾರ್ವಜನಿಕರಿಗೆ ತೊಂದರೆಯಾಗದಂತೆ ಕುಡಿಯುವ ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಮಾಡುವುದಾಗಿ ತಿಳಿಸಿದರು.,

ಮಾನ್ಯ ಅಧ್ಯಕ್ಷರು ಕಂದಾಯ ಪರಿವೀಕ್ಷಕರನ್ನು ಮತದಾರರ ಗುರ್ತಿನ ಚೀಟಿ ವಿತರಣೆ ಹಾಗೂ ಮತದಾನದ ಪಟ್ಟಿ ಪರಿಷ್ಕರಣೆಯ ಬಗ್ಗೆ ಸಭೆಯಲ್ಲಿ ವಿವರಣೆ ಕೋರಿದರು

ಕಂದಾಯ ಅಧಿಕಾರಿಗಳು ಸಭೆಯಲ್ಲಿ ಮತದಾರರ ಕರಡು ಪಟ್ಟಿ ತಯಾರಾಗಿದ್ದು ಅದನ್ನು ಪ್ರದರ್ಶಿಸಿದ ಮೇಲೆ ಅಂತಿಮ ಪಟ್ಟಿ ಪ್ರಕಟಿಸಿ ಗುರ್ತಿನ ಚೀಟಿಯನ್ನು ಸಾರ್ವಜನಿಕರಿಗೆ ನೀಡಲಾಗುವುದೆಂದು ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ಕಂದಾಯ ಪರಿವೀಕ್ಷಕರನ್ನು ಅಗಸ್ಟ್ ತಿಂಗಳಿನಲ್ಲಿ ಒಟ್ಟು ವಸೂಲತಿಯಾದ ಮೊತ್ತದ ವಿವರಣೆಯನ್ನು ಕೋರಿದರು.

ಕಂದಾಯ ಪರಿವೀಕ್ಷಕರು ಸಭೆಯಲ್ಲಿ ವಿವರಣೆ ನೀಡಿದರು.

ಮಾನ್ಯ ಅಧ್ಯಕ್ಷರು ಕೋವಿಡ್-19 ಆರೋಗ್ಯ ಇಲಾಖೆಯವರಿಗೆ ಕೋವಿಡ್-19 3ನೇ ಅಲೆಯ ಬಗ್ಗೆ ಕೈಗೊಂಡ ಕ್ರಮಗಳ ಸಭೆಯಲ್ಲಿ ವಿವರಣೆ ಕೋರಿದರು

ಆರೋಗ್ಯ ವೈದ್ಯಾಧಿಕಾರಿಗಳ ಪ್ರತಿನಿಧಿಯು ಕೋವಿಡ್-19 3ನೇ ಅಲೆಯಿಂದ ಕೋವಿಡ್-19 ಟೆಸ್ಟ್‌ಗಳನ್ನು ಹೆಚ್ಚಿಸಿದ್ದು ಹಾಗೂ ಆಶಾ ಕಾರ್ಯಕರ್ತೆಯರು ಪ್ರತಿ ಮನೆಗೆ ಹೋಗಿ ಪ್ರತಿಯೊಬ್ಬರ ಆರೋಗ್ಯ ವಿಚಾರಿಸಿ ಕೋವಿಡ್-19 ಸೋಂಕು ಕಾಣಿಸಿದವರಿಗೆ ವೈದ್ಯರುಗಳ ಸೂಚಿಸಿದಂತೆ ಹೋಮ್ ಕ್ವರಂಟೈನ್, ಅಸ್ಪತ್ರೆಗೆ ಚಿಕಿತ್ಸೆಗೆ ಶಿಫಾರಸ್ಸು ಮಾಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಲಸಿಕೆ ನೀಡುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ಮುಖ್ಯ ರಸ್ತೆಗಳಲ್ಲಿ ಗುಂಡಿ ಮುಚ್ಚಿ ವಾಹನ ಸಂಚಾರರಿಗೆ ಅನುಕೂಲ ಮಾಡಿಕೊಡಬೇಕೆಂದು ಸಭೆಯಲ್ಲಿ ತಿಳಿಸಿದರು.

ಸಂಚಾಲಕರು ಹಾಗೂ ಸಹಾಯಕ ಅಭಿಯಂತರರು ಈಗಾಗಲೇ ರಸ್ತೆ ಗುಂಡಿಗಳನ್ನು ಮುಚ್ಚಿದ್ದು ಮಳೆ ಕಾರಣದಿಂದ ಇನ್ನು ಕೆಲವು ಸ್ಥಳಗಳಲ್ಲಿ ಗುಂಡಿ ಮುಚ್ಚಲು ಸಾಧ್ಯವಾಗಿರುವುದಿಲ್ಲ, ಮುಂದಿನ ದಿನಗಳಲ್ಲಿ ವಾಡ್-137 ಗುಂಡಿ ಮುಕ್ತವಾಗುವುದೆಂದು ಸಭೆಯಲ್ಲಿ ತಿಳಿಸಿದರು.

ಮಾನ್ಯ ಅಧ್ಯಕ್ಷರು ವಾರ್ಡ್-137 ವ್ಯಾಪ್ತಿಯಲ್ಲಿ ಮುಖಗವಚ ಧರಿಸದೇ ಓಡಾಡುವರಿಗೆ ವಿಧಿಸಿದ ದಂಡದ ವಿವರವನ್ನು ಸಭೆಯಲ್ಲಿ ನೀಡುವಂತೆ ಕೋರಿದರು.

ಮಾರ್ಷಲ್ ರವರು ವಾರ್ಡ್137 ವ್ಯಾಪ್ತಿಯಲ್ಲಿ ಮಾಸ್ ಧರಿಸದೆ ಇರುವವರಿಗೆ 25000 ಮತ್ತು ಎಸ್. ಡಬ್ಲ್ಯೂ. ಎಂ 5000 ದಂಡ ವಸೂಲಾಗಿರುವ ಬಗ್ಗೆ ಸಭೆಯಲ್ಲಿ ತಿಳಿಸಿದರು

ಇಂದಿನ ಸಭೆಯಲ್ಲಿ ಚರ್ಚಿಸಿದ ಹಾಗೂ ನಿರ್ಣಯಗಳನ್ನು ಕಾರ್ಯದರ್ಶಿ ಮತ್ತು ಸಂಚಾಲಕರು. ಸಭೆಯ ನಡಾವಳಿಗಳ ಪುಸ್ತಕದಲ್ಲಿ ದಾಖಲಿಸಿದರು. ವಂದನಾರ್ಪಣೆ ಮಾಡುವುದರ ಮೂಲಕ ಇಂದಿನ ಸಭೆಯನ್ನು ಮುಕ್ತಾಯಗೊಳಿಸಿದರು.

# ಹಾಜರಿದ್ದ ವಾರ್ಡ್ ಕಮಿಟಿ ಸದಸ್ಯರು

| ಕ್ರಮ ಸಂಖ್ಯೆ | ವಾರ್ಡ್ ಹಂತದ ಸಮಿತಿ ಹಾಗೂ ಸದಸ್ಯರುಗಳ ಹೆಸರು ಮೊಬೈಲ್ ಸಂಖ್ಯೆ | | ಸಹಿ |
|---|---|---|---|
| 1 | ಮೊಹಮದ್ ಜಾವೀದ್, ಸಹಾಯಕ ಕಾರ್ಯಪಾಲಕ ಅಭಿಯಂತರರು(ವಸಂತನಗರ ಉಪ ವಿಭಾಗ) ಬಿ.ಬಿ.ಎಂ.ಪಿ. ದೂ. ಸಂಖ್ಯೆ: 9480720206 | ಅಧ್ಯಕ್ಷರು ಮತ್ತು ವಾರ್ಡ್‌ನ ನೋಡಲ್ ಅಧಿಕಾರಿ | [signature] |
| 2 | ಶ್ರೀ ಗಿರಿಧರ್ ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ: 137 ಬಿ.ಬಿ.ಎಂ.ಪಿ. ದೂ. ಸಂ 8618436036 | ಸದಸ್ಯ ಕಾರ್ಯದರ್ಶಿ | [signature] |
| 3 | ಗೀತಾ ಹೆಚ್. ದೂ. 9980367126 ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ -137 | ಸದಸ್ಯರು | [signature] |
| 4 | ಸಹಾಯಕ ಕಾರ್ಯಪಾಲಕ ಅಭಿಯಂತರರ (ಕಾಮಗಾರಿ) ಜೆ.ಸಿ.ಆರ್ ನಗರ ಉಪ ವಿಭಾಗದ ರವರ ಪ್ರತಿನಿಧಿ ಶ್ರೀ ಬಾಬು (ಕೆಲಸ ಪರಿವೀಕ್ಷಕರು) ವಾರ್ಡ್-137. ದೂ. 9342582372 | ಸದಸ್ಯರು | [signature] |
| 5 | ಆರೋಗ್ಯಾಧಿಕಾರಿಗಳು, ಚಾಮರಾಜಪೇಟೆ ವಿಭಾಗ ರವರ ಪ್ರತಿನಿಧಿ ಬಸವಲಿಂಗಯ್ಯ ದೂ. 9686419488 | ಸದಸ್ಯರು | [signature] |
| 6 | ಶ್ರೀ ಸಿ. ಆರ್ ರವಿ ಪ್ರಸಾದ್ ವಾರ್ಡ್ ಪ್ರದೇಶದಲ್ಲಿನ ಸ್ಥಳೀಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ. ದೂ. 9845602912 | ಸದಸ್ಯರು | [signature] |
| 7 | ಶ್ರೀ ರಿಜ್ವಾನ್. ವಾರ್ಡ್ ಪ್ರದೇಶದಲ್ಲಿನ ಸ್ಥಳೀಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ. ದೂ. 9845262860 | ಸದಸ್ಯರು | |
| 8 | ಶ್ರೀ ರಾಜು. ದೂ.. 7676512877 ವಾರ್ಡ್ ಪ್ರದೇಶದಲ್ಲಿನ ಸ್ಥಳೀಯ ನಾಗರಿಕ ಕಲ್ಯಾಣ ಸಂಘದ ಪ್ರತಿನಿಧಿ. | ಸದಸ್ಯರು | |
| 9 | ಶ್ರೀಮತಿ ಆಶಾ. ದೂ. 9731317223 ಕಂದಾಯ ಪರಿವೀಕ್ಷಕರು | ಸದಸ್ಯರು | [signature] |
| 10 | ಸಹಾಯಕ ಕಾರ್ಯಪಾಲಕ ಅಭಿಯಂತರರು (ಘ.ತ್ಯಾ.ನಿ) ರವರ ಪ್ರತಿನಿಧಿ | ಸದಸ್ಯರು | [signature] |
| 11 | ಸಹಾಯಕ ಕಾರ್ಯಪಾಲಕ ಅಭಿಯಂತರರ (ಬಿಡಬ್ಲ್ಯೂ.ಎಸ್.ಎಸ್.ಬಿ) ರವರ ಪ್ರತಿನಿಧಿ ಶ್ರೀ ಕುಮಾರ್ ಸ್ವಾಮಿ. ದೂ. 9060341644 | ಸದಸ್ಯರು | [signature] |
| 12 | ಸಹಾಯಕ ಕಾರ್ಯ ಪಾಲಕ ಅಭಿಯಂತರರು (ಬೆಸ್ಕಂ) ರವರ ಪ್ರತಿನಿಧಿ. ದೂ. 9449840364 | ಸದಸ್ಯರು | |

[signature]
ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 137
ವಾರ್ಡ್ ಹಂತದ ಸಮಿತಿ

[signature]
ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಹಂತದ ಸಮಿತಿ, ವಾರ್ಡ್ ನಂ. 137

ಪ್ರತಿಯನ್ನು,

1. ಜಂಟಿ ಆಯುಕ್ತರು ಪಶ್ಚಿಮ ರವರ ಅವಗಾಹನೆಗೆ ಸಲ್ಲಿಸಿದೆ,
2. ಮುಖ್ಯ ಅಭಿಯಂತರರು ಪಶ್ಚಿಮ ರವರ ಮಾಹಿತಿಗೆ ಸಲ್ಲಿಸಿದೆ,
3. ಕಛೇರಿ ಕಡತಕ್ಕೆ.